# All India Radio: Bangalore
# National Bulletin In Kannada
# 14.02.2026  1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**14.02.2026  1.10 p.m.**

**<><><><>**

ಮುಖ್ಯಾಂಶಗಳು

1. ಅಸ್ಸಾಂನಲ್ಲಿಂದು ತುರ್ತು ವಿಮಾನ ಭೂಸ್ಪರ್ಶ ಸೌಲಭ್ಯ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ
2. ನವದೆಹಲಿಯಲ್ಲಿ ಇದೇ ೧೬ ರಿಂದ ಐದು ದಿನಗಳ ಕಾಲ ಇಂಡಿಯಾ-ಎಐ ಇಂಪ್ಯಾಕ್ಟ್ ಶೃಂಗಸಭೆ
3. ಪುಲ್ವಾಮಾ ದಾಳಿಯಲ್ಲಿ ಹುತಾತ್ಮರಾದ ವೀರ ಯೋಧರಿಗೆ ಗಣ್ಯರಿಂದ ಗೌರವ ನಮನ
4. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಒಮನ್‌ಗೆ ೨೩೬ ರನ್‌ಗಳ ಬೃಹತ್ ಗುರಿ ನೀಡಿದ ಐರ್ಲೆಂಡ್

<><><><>

ಅಸ್ಸಾಂನ ದಿಬ್ರುಗಢ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಅಭಿವೃದ್ಧಿಪಡಿಸಲಾದ ಮೋರನ್ ಬೈಪಾಸ್‌ನಲ್ಲಿರುವ ತುರ್ತು ವಿಮಾನ ಭೂಸ್ಪರ್ಶ ಸೌಲಭ್ಯವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟಿಸಿದರು. ಅಸ್ಸಾಂಗೆ ಒಂದು ದಿನದ ಭೇಟಿ ನೀಡಿರುವ ಅವರು, ಇಂದು ಬೆಳಗ್ಗೆ ಮೋರನ್ ಬೈಪಾಸ್‌ನಲ್ಲಿರುವ ತುರ್ತು ಭೂಸ್ಪರ್ಶ ಸೌಲಭ್ಯದಲ್ಲಿ ವಿಶೇಷ ವಿಮಾನದಲ್ಲಿ ಬಂದಿಳಿದರು. ಬಳಿಕ ಅವರು, ಸುಖೋಯ್-ಸು-೩೦ ಎಂಕೆಐ, ರಫೇಲ್, ಎಎನ್-೩೧, ತೇಜಸ್, ಅತ್ಯಾಧುನಿಕ ಲಘು ಹೆಲಿಕಾಪ್ಟರ್‌ಗಳು ಸೇರಿದಂತೆ ಯುದ್ಧ ವಿಮಾನಗಳು, ಸಾರಿಗೆ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳ ವೈಮಾನಿಕ ಪ್ರದರ್ಶನವನ್ನು ವೀಕ್ಷಿಸಿದರು.  ತುರ್ತು ಸಂದರ್ಭಗಳಲ್ಲಿ ಮಿಲಿಟರಿ ಮತ್ತು ನಾಗರಿಕ ವಿಮಾನಗಳ ಲ್ಯಾಂಡಿಂಗ್ ಮತ್ತು ಟೇಕ್‌ಆಫ್‌ಗಾಗಿ ಭಾರತೀಯ ವಾಯುಪಡೆಯ ಸಮನ್ವಯದಿಂದ ವಿನ್ಯಾಸಗೊಳಿಸಲಾದ ಮತ್ತು ಈಶಾನ್ಯ ಭಾರತದಲ್ಲಿ ನಿರ್ಮಿಸಲಾದ ಮೊದಲ ತುರ್ತು ವಿಮಾನ ಭೂಸ್ಪರ್ಶ ಸೌಲಭ್ಯ ಇದಾಗಿದೆ. ಇಂದು ಮಧ್ಯಾಹ್ನ ಪ್ರಧಾನಿ ಅವರು ಗುವಾಹಟಿಯಲ್ಲಿ ೫ ಸಾವಿರದ ೪೫೦ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ

ವಿವಿಧ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಬ್ರಹ್ಮಪುತ್ರ ನದಿಗೆ ಅಡ್ಡಲಾಗಿ ಗುವಾಹತಿ ಮತ್ತು ಉತ್ತರ ಗುವಾಹಟಿಯನ್ನು ಸಂಪರ್ಕಿಸುವ ಕುಮಾರ್ ಭಾಸ್ಕರ್ ವರ್ಮಾ ಸೇತುವೆಯನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. ಮೂರು ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಸೇತುವೆಯನ್ನು ನಿರ್ಮಿಸಲಾಗಿದೆ. ಬಳಿಕ ಅವರು, ಕಾಮರೂಪ ಜಿಲ್ಲೆ ಅಮಿನ್‌ಗಾವ್ ಸಮೀಪದ ಲಲಿತ್‌ಘಾಟ್‌ಗೆ ತೆರಳಿ, ಐಐಎಂ ಗುವಾಹಟಿಯ ತಾತ್ಕಾಲಿಕ ಕ್ಯಾಂಪಸ್ ಮತ್ತು ಈಶಾನ್ಯ ಪ್ರದೇಶಕ್ಕಾಗಿ ರಾಷ್ಟ್ರೀಯ ದತ್ತಾಂಶ ಕೇಂದ್ರಕ್ಕೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದೇ ವೇಳೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಚಂಡೀಗಢದ ಸೆಕ್ಟರ್ ೪೩ರಲ್ಲಿ ಪ್ರಧಾನಮಂತ್ರಿ ಇ-ಬಸ್ ಸೇವಾ ಯೋಜನೆಯಡಿ ಹೊಸ ಎಲೆಕ್ಟ್ರಿಕ್ ಬಸ್‌ಗಳಿಗೆ ವರ್ಚುಯಲ್ ಮೂಲಕ ಚಾಲನೆ ನೀಡಲಿದ್ದಾರೆ. ಪಿಎಂ-ಇ-ಬಸ್ ಸೇವಾ ಯೋಜನೆಯು ೨೦೨೩ರ ಆಗಸ್ಟ್‌ನಲ್ಲಿ ಪ್ರಾರಂಭವಾದ ಕೇಂದ್ರ ಸರ್ಕಾರದ ಉಪಕ್ರಮವಾಗಿದ್ದು, ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯ ಮೂಲಕ ೧೬೯ ನಗರಗಳಲ್ಲಿ ೧೦ ಸಾವಿರ ಎಲೆಕ್ಟ್ರಿಕ್ ಬಸ್‌ಗಳನ್ನು ನಿಯೋಜಿಸಲು ಉದ್ದೇಶಿಸಲಾಗಿದೆ. ಒಟ್ಟು ೫೭ ಸಾವಿರದ ೬೧೩ ಕೋಟಿ ರೂಪಾಯಿ ವೆಚ್ಚದೊಂದಿಗೆ, ಈ ಯೋಜನೆಯು ಹಸಿರು ನಗರ ಚಲನಶೀಲತೆಯನ್ನು ಹೆಚ್ಚಿಸುವ ಗುರಿ ಹೊಂದಿದ್ದು, ಸಂಘಟಿತ ಬಸ್ ಸೇವೆಗಳ ಕೊರತೆಯಿರುವ ನಗರಗಳ ಮೇಲೆ ಕೇಂದ್ರೀಕರಿಸುತ್ತದೆ ಮತ್ತು ಡಿಪೋ ಮೂಲಸೌಕರ್ಯ ಅಭಿವೃದ್ಧಿಯನ್ನು ಒಳಗೊಂಡಿದೆ.

<><><><>

ನವದೆಹಲಿಯಲ್ಲಿ ಈ ತಿಂಗಳ ೧೬ ರಿಂದ ೨೦ ರವರೆಗೆ ನಡೆಯಲಿರುವ ಇಂಡಿಯಾ-ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ ರಲ್ಲಿ ಪ್ರಮುಖ ವಿಶ್ವ ನಾಯಕರು ಭಾಗವಹಿಸಲಿದ್ದಾರೆ. ಶೃಂಗಸಭೆಯಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಮತ್ತು ಗ್ರೀಸ್ ಪ್ರಧಾನಿ ಕಿರಿಯಾಕೋಸ್ ಮಿಟ್ಸೋಟಾಕಿಸ್ ಭಾಗವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಪ್ರಧಾನಿ ನರೇಂದ್ರ ಮೋದಿಯವರ ಆಹ್ವಾನದ ಮೇರೆಗೆ, ಇತರ ಹಲವಾರು ನಾಯಕರು ಸಹ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದರಲ್ಲಿ ನೆದರ್ಲ್ಯಾಂಡ್ಸ್ ಪ್ರಧಾನಿ ಡಿಕ್ ಸ್ಕೂಫ್, ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸಾನಾಯಕ, ಭೂತಾನ್ ಪ್ರಧಾನಿ ತ್ಸೆರಿಂಗ್ ಟೋಬ್ಗೆ ಮತ್ತು ಮಾರಿಷಸ್ ಪ್ರಧಾನಿ

ನವೀನ್ಚಂದ್ರ ರಾಮ್ಗೂಲಮ್ ಸೇರಿದ್ದಾರೆ. ಅಲ್ಲದೇ ಶೃಂಗಸಭೆಯಲ್ಲಿ ಸ್ಪೇನ್ ಅಧ್ಯಕ್ಷ ಪೆಡ್ರೊ ಸ್ಯಾಂಚೆಜ್ ಪೆರೆಜ್-ಕ್ಯಾಸ್ಟೆಜಾನ್, ಅಬುಧಾಬಿಯ ರಾಜಕುಮಾರ ಶೇಖ್ ಖಲೀದ್ ಬಿನ್ ಮೊಹಮ್ಮದ್ ಕ್ರೊಯೇಷಿಯಾ ಪ್ರಧಾನಿ ಆಂಡ್ರೆಜ್ ಪ್ಲೆಂಕೋವಿಕ್, ಎಸ್ಟೋನಿಯಾ ಅಧ್ಯಕ್ಷ ಅಲರ್ ಕರಿಸ್, ಫಿನ್‌ಲ್ಯಾಂಡ್ ಪ್ರಧಾನಿ ಪೆಟ್ಟೇರಿ ಓರ್ಪೊ, ಕಝಾಕಿಸ್ತಾನ್ ಪ್ರಧಾನಿ ಓಲ್ಜಾಸ್ ಬೆಕ್ತೆನೋವ್, ಲಿಚ್ಟೆನ್‌ಸ್ಟೈನ್ ಆನುವಂಶಿಕ ರಾಜಕುಮಾರ ಅಲೋಯಿಸ್, ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ, ಸ್ವಿಟ್ಜರ್ಲೆಂಡ್ ಅಧ್ಯಕ್ಷ ಗೈ ಪಾರ್ಮೆಲಿನ್, ಬೊಲಿವಿಯಾ ಉಪಾಧ್ಯಕ್ಷ ಎಡ್ಮಂಡ್ ಲಾರಾ ಮೊಂಟಾನೊ, ಗಯಾನಾ ಉಪಾಧ್ಯಕ್ಷ ಭರತ್ ಜಗದಿಯೊ, ಸೆರ್ಬಿಯಾ ಉಪಾಧ್ಯಕ್ಷ ಅಲೆಕ್ಸಾಂಡರ್ ವುಸಿಕ್ ಮತ್ತು ಸೀಶೆಲ್ಸ್ ಉಪಾಧ್ಯಕ್ಷ ಸೆಬಾಸ್ಟಿಯನ್ ಪಿಳ್ಳೈ ಪಾಲ್ಗೊಳ್ಳಲಿದ್ದಾರೆ. ಇದೇ ವೇಳೆ ೪೫ ಕ್ಕೂ ಹೆಚ್ಚು ದೇಶಗಳ ನಿಯೋಗಗಳು ಶೃಂಗಸಭೆಯಲ್ಲಿ ಭಾಗವಹಿಸಲಿವೆ. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ಹಲವಾರು ಅಂತಾರಾಷ್ಟ್ರೀಯ ಸಂಸ್ಥೆಗಳ ಹಿರಿಯ ಅಧಿಕಾರಿಗಳು ಸಹ ಚರ್ಚೆಗಳಲ್ಲಿ ಭಾಗವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><><>

೨೦೧೯ರ ಪುಲ್ವಾಮಾ ದಾಳಿಯಲ್ಲಿ ಪ್ರಾಣಾರ್ಪಣೆ ಮಾಡಿದ ವೀರ ಯೋಧರಿಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಲೋಕಸಭೆಯ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ ಸೇರಿದಂತೆ ಅನೇಕ ಗಣ್ಯರು ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಹುತಾತ್ಮ ಯೋಧರ ಅತ್ಯುನ್ನತ ತ್ಯಾಗವು ದೇಶದ ನೆನಪಿನಲ್ಲಿ ಶಾಶ್ವತವಾಗಿ ಉಳಿಯುತ್ತದೆ. ಅವರ ತ್ಯಾಗ ಪ್ರತಿಯೊಬ್ಬ ಭಾರತೀಯನು ಬಲಿಷ್ಠ ಮತ್ತು ಸುರಕ್ಷಿತ ಭಾರತ ನಿರ್ಮಿಸುವತ್ತ ಶ್ರಮಿಸಲು ನಿರಂತರವಾಗಿ ಪ್ರೇರೇಪಿಸುತ್ತದೆ ಎಂದು ಹೇಳಿದ್ದಾರೆ. ಈ ಯೋಧರ ಸಂಕಲ್ಪ, ಸಮರ್ಪಣೆ ಮತ್ತು ರಾಷ್ಟ್ರಕ್ಕೆ ಅವರು ನೀಡಿರುವ ಸೇವೆ ನಮ್ಮ ಸಾಮೂಹಿಕ ಪ್ರಜ್ಞೆಯಲ್ಲಿ ಶಾಶ್ವತವಾಗಿ ಉಳಿಯುತ್ತದೆ. ಅವರು ತೋರಿದ ಶೌರ್ಯದಿಂದ ಪ್ರತಿಯೊಬ್ಬ ಭಾರತೀಯನೂ ಶಕ್ತಿ ಪಡೆಯುತ್ತಾನೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಚಿವ ಡಾ. ಎಸ್. ಜೈಶಂಕರ್,

ಹುತಾತ್ಮ ಯೋಧರ ತ್ಯಾಗವು ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆ ಅನುಸರಿಸುವ ಭಾರತದ ಸಂಕಲ್ಪವನ್ನು ಬಲಪಡಿಸುತ್ತದೆ ಎಂದು ಹೇಳಿದ್ದಾರೆ.

<><><><>

೧೯೯೮ರ ಫೆಬ್ರವರಿ ೧೪ರಂದು ನಡೆದ ಕೊಯಮತ್ತೂರು ಸರಣಿ ಬಾಂಬ್ ಸ್ಫೋಟದಲ್ಲಿ ಮಡಿದವರಿಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಈ ಘಟನೆಯು ಭಾರತದ ಇತಿಹಾಸದಲ್ಲಿ ದುಃಖದ ಅಧ್ಯಾಯವಾಗಿದೆ. ಇದು ಲೆಕ್ಕವಿಲ್ಲದಷ್ಟು ಕುಟುಂಬಗಳ ಮೇಲೆ ಆಳವಾದ ಗಾಯವನ್ನುಂಟುಮಾಡಿದೆ ಎಂದು ಹೇಳಿದ್ದಾರೆ. ಈ ಸರಣಿ ಬಾಂಬ್ ಸ್ಫೋಟದ ಪೈಕಿ ಒಂದರಲ್ಲಿ ತಾವು ಕೂದಲೆಳೆಯ ಅಂತರದಲ್ಲಿ ಪಾರಾಗಿದ್ದೇವೆ ಎಂದು ತಿಳಿಸಿರುವ ಅವರು, ಗಾಯಾಳುಗಳನ್ನು ರಕ್ಷಿಸಲು ಹೆಣಗಾಡುವ ಮತ್ತು ತೀವ್ರವಾಗಿ ಗಾಯಗೊಂಡವರನ್ನು ಆಸ್ಪತ್ರೆಗಳಿಗೆ ಸಾಗಿಸುವ ಆ ಭಯಾನಕ ಕ್ಷಣಗಳು ತಮ್ಮ ಜೀವನದ ಅತ್ಯಂತ ನೋವಿನ ಅವಧಿಯಾಗಿದೆ ಎಂದು ಹೇಳಿದ್ದಾರೆ. ಭಯೋತ್ಪಾದನೆಯ ವಿರುದ್ಧ ಒಗ್ಗಟ್ಟಿನಿಂದ ನಿಲ್ಲುವ ಹಾಗೂ ಶಾಂತಿ, ಸಾಮರಸ್ಯ ಮತ್ತು ರಾಷ್ಟ್ರೀಯ ಸಮಗ್ರತೆಯನ್ನು ಎತ್ತಿಹಿಡಿಯುವ ಸಾಮೂಹಿಕ ಸಂಕಲ್ಪವನ್ನು ಪುನರುಚ್ಚರಿಸುವಂತೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ನಾಗರಿಕರನ್ನು ಒತ್ತಾಯಿಸಿದ್ದಾರೆ.

<><><><>

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಇಂದು ಚೆನ್ನೈನಲ್ಲಿ ಸಂಶೋಧನಾ ಉದ್ಯಮ, ನವೋದ್ಯಮ ಮತ್ತು ಉದ್ಯಮಶೀಲತಾ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ. ಚೆನ್ನೈ ಮತ್ತು ಕಾರೈಕುಡಿಯಲ್ಲಿರುವ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಘಟಕಗಳ ಮಂಡಳಿಯು ಎರಡು ದಿನಗಳ ಈ ಸಮಾವೇಶವನ್ನು ಆಯೋಜಿಸಿದೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾಹಿತಿ ಹಂಚಿಕೊಂಡಿರುವ ಚೆನ್ನೈನ ಸ್ಟ್ರಕ್ಚರಲ್ ಎಂಜಿನಿಯರಿಂಗ್ ಸಂಶೋಧನಾ ಕೇಂದ್ರದ ನಿರ್ದೇಶಕಿ ಡಾ.ಎನ್. ಆನಂದವಲ್ಲಿ, ನವೋದ್ಯಮಗಳು, ಎಂಎಸ್‌ಎಂಇಗಳು, ಕೈಗಾರಿಕಾ ಉದ್ಯಮಿಗಳು, ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆಗಳು ಮತ್ತು ಸಾರ್ವಜನಿಕರಿಗೆ ನಾವೀನ್ಯತೆ ನೇತೃತ್ವದ ಬೆಳವಣಿಗೆಯನ್ನು ಉತ್ತೇಜಿಸಲು ಸಾಮಾನ್ಯ ವೇದಿಕೆ ರಚಿಸುವ ಗುರಿಯನ್ನು ಈ ಸಮಾವೇಶ ಹೊಂದಿದೆ ಎಂದು ಹೇಳಿದ್ದಾರೆ. ರಚನಾತ್ಮಕ ಸಹಯೋಗವನ್ನು ಬಲಪಡಿಸಲು ಸಮಾವೇಶದ ಸಮಯದಲ್ಲಿ

ಸಿಎಸ್ಐಆರ್ ಮತ್ತು ಶೈಕ್ಷಣಿಕ ಸಂಸ್ಥೆಗಳು ಹಾಗೂ ಅವುಗಳ ಇನ್ಕ್ಯುಬೇಶನ್ ಕೇಂದ್ರಗಳ ನಡುವೆ ತಿಳಿವಳಿಕೆ ಒಪ್ಪಂದವೊಂದನ್ನು ವಿನಿಮಯ ಮಾಡಿಕೊಳ್ಳಲಾಗುವುದು. ೧೦೦ ಕ್ಕೂ ಹೆಚ್ಚು ಪ್ರದರ್ಶಕರು ಸಮಾವೇಶದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><><>

ಅಮೆರಿಕದ ಉತ್ತರ ಕೊಲರಾಡೋ ಸಮೀಪ ಚಿಕ್ಕ ವಿಮಾನವೊಂದು ಪತನಗೊಂಡಿದ್ದು, ನಾಲ್ವರು ಪ್ರಯಾಣಿಕರು ಮೃತಪಟ್ಟಿದ್ದಾರೆ. ಆರು ಆಸನಗಳ ಟರ್ಬೋ ಪ್ರೂಫ್ ಎಪಿಕ್ ಇ-೧೦೦೦ ವಿಮಾನದಲ್ಲಿ ನಾಲ್ವರು ಪ್ರಯಾಣಿಸುತ್ತಿದ್ದರು. ಪರ್ವತ ಪ್ರದೇಶದಲ್ಲಿ ಸಂಚರಿಸುತ್ತಿದ್ದ ಸಮಯದಲ್ಲಿ ವಿಮಾನ ಅಪಘಾತಕ್ಕೀಡಾಗಿದೆ. ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಶನ್ - ಎಫ್ಎಎ ಮತ್ತು ಅಮೆರಿಕದ ರಾಷ್ಟ್ರೀಯ ಸಾರಿಗೆ ಸುರಕ್ಷತಾ ಮಂಡಳಿ ಘಟನೆ ಕುರಿತು ತನಿಖೆ ಆರಂಭಿಸಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><><>

ಕೊಲಂಬೋದ ಸಿನ್ಹಳೀಸ್ ಸ್ಪೋರ್ಟ್ಸ್ ಕ್ಲಬ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ೨೦೨೬ರ ಬಿ ಗುಂಪಿನ ೨೨ನೇ ಪಂದ್ಯದಲ್ಲಿ ಐರ್ಲೆಂಡ್ ಮತ್ತು ಒಮನ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಒಮನ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಐರ್ಲೆಂಡ್, ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೩೫ ರನ್ ಗಳಿಸಿತು. ೨೩೬ ರನಗಳ ಗೆಲುವಿನ ಗುರಿ ಬೆನ್ನತ್ತಿರುವ ಒಮನ್, ಇತ್ತೀಚಿನ ವರದಿ ಬಂದಾಗ ೧.೧ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ ೧೭ ರನ್ ಮಾಡಿ ಆಡುತ್ತಿದೆ. ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಸಿ ಗುಂಪಿನ ೨೩ನೇ ಪಂದ್ಯದಲ್ಲಿ ಇಂಗ್ಲೆಂಡ್ ಮತ್ತು ಸ್ಕಾಟ್‌ಲ್ಯಾಂಡ್ ತಂಡಗಳು ಸೆಣಸಾಟ ನಡೆಸಲಿವೆ. ಪಂದ್ಯ ಅಪರಾಹ್ನ ೩ ಗಂಟೆಗೆ ಆರಂಭವಾಗಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಡಿ ಗುಂಪಿನ ೨೪ನೇ ಪಂದ್ಯದಲ್ಲಿ ನ್ಯೂಜಿಲೆಂಡ್ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಮುಖ್ಯಾಮುಖಿಯಾಗಲಿವೆ. ಪಂದ್ಯ ರಾತ್ರಿ ೭ ಗಂಟೆಗೆ ಆರಂಭವಾಗಲಿದೆ.

<><><><>

೨೦೨೬ ರ ಅಬುಧಾಬಿ ಓಪನ್ ಮಾಸ್ಟರ್ಸ್ ಗೇಮ್ಸ್‌ನ ಪುರುಷರ ಹ್ಯಾಮರ್ ಥ್ರೋ ವಿಭಾಗದಲ್ಲಿ ಭಾರತೀಯ ಕ್ರೀಡಾಪಟುಗಳು ಅದ್ಭುತ ಪ್ರದರ್ಶನ ನೀಡಿದ್ದಾರೆ. ಹಿರಿಯರ ಅಥ್ಲೆಟ್ಸ್ ವಿಭಾಗದಲ್ಲಿ ಕಿಶೋರ ಕುಮಾರ್ ಚಂದ್ರಿರಾ ಮೋಗನ್ ಚಿನ್ನ ಮತ್ತು ಮೊಹಮ್ಮದ್ ಅನ್ಸಾರ್ ಕಂಚಿನ ಪದಕ ಗೆದ್ದರು. ಕಿಶೋರ ಕುಮಾರ್ ೩೭.೯೨ ಮೀಟರ್ ದೂರ ಎಸೆದು ಅಗ್ರ ಸ್ಥಾನ ಪಡೆದರು. ಮೊಹಮ್ಮದ್ ಅನ್ಸಾರ್, ಮೂರನೇ ಸ್ಥಾನಕ್ಕೆ ತೃಪ್ತರಾದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>